**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

**<u>ಅಸಲು ದಾವೆ ಸಂಖ್ಯೆ. 196/2022</u>**

**ಪಿ.ಡಬ್ಲ್ಯು:1**

**ದಿನಾಂಕಃ 29-10-2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ 1 ನೇ ವಾದಿಪರ: ಶ್ರೀ. ಕೆ.ಆರ್.ಎಸ್. ವಕೀಲರಿಂದಃ-</u>**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸುತ್ತಿದ್ದೇನೆ. ಅದನ್ನು ಓದಿ ತಿಳಿದು, ಸಹಿ ಮಾಡಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಸಾಕ್ಷಿಯು ಕೆಳಕಂಡ ದಾಖಲಾತಿಗಳನ್ನು ನೋಡಿ ಗುರುತಿಸಿರುತ್ತಾರೆ.

ವಂಶವೃಕ್ಷದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.1 ಎಂದು, 07 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.2 ರಿಂದ 8 ಎಂದು, ಅಸೆಸ್ಮೆಂಟ್ ನಕಲಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.9 ಎಂದು, ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.10 ಎಂದು, ಚಿಕ್ಕನಲ್ಲೂರು ಗ್ರಾಮದ ಅಂಗನವಾಡಿ-1 ರ ಕಾರ್ಯಕರ್ತೆ ನೀಡಿದ ದಾಖಲಾತಿ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.11 ಎಂದು, ವ್ಯಾಸಂಗ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.12 ಎಂದು, ಎರಡು ಶಾಲಾ ದಾಖಲಾತಿಯನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ.13 ಮತ್ತು 14 ಎಂದು, ಜನನ ಪ್ರಮಾಣಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.15 ಎಂದು, ಎರಡು ಶಾಲಾ ದಾಖಲಾತಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ.16 ಮತ್ತು 17 ಎಂದು, ಮೂರು ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.18 ರಿಂದ 20 ಎಂದು, ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.21 ಎಂದು ಗುರುತಿಸಲಾಯಿತು.

**(ಮುಂದುವರೆದ ಮುಖ್ಯ ವಿಚಾರಣೆಗಾಗಿ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು)**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದ್ದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ

ಸಹಿ/-
2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು ಕಡೂರು.